All India Radio: Bangalore
National Bulletin In Kannada
07.02.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*****************

ಮುಖ್ಯಾಂಶಗಳು

೧. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಕರ್ನಾಟಕ ಪ್ರವಾಸ; ರಾಣೆಬೆನ್ನೂರಿಯಲ್ಲಿ ಕರ್ನಾಟಕ ವೈಭವ ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವದಲ್ಲಿ ಭಾಗಿ

೨. ಕೇಂದ್ರ ಸರ್ಕಾರದಿಂದ ಕೌಶಲ್ಯ ಅಭಿವೃದ್ಧಿ, ಆರ್ಥಿಕ ಉನ್ನತಿ ಮತ್ತು ಕೈಗಾರಿಕೀಕರಣಕ್ಕೆ ಆದ್ಯತೆ - ಪ್ರಧಾನಿ ನರೇಂದ್ರ ಮೋದಿ

೩. ಪಿಎಂ ಗತಿಶಕ್ತಿ ಯೋಜನೆಯಡಿ ೨,೪೦೦ ಕಿಲೋಮೀಟರ್ ಉದ್ದದ ೮ ರಾಷ್ಟ್ರೀಯ ಅತಿ ವೇಗದ ಕಾರಿಡಾರ್‌ಗಳ ಕಾರ್ಯಗತ

೪. ಮೂರು ಪಂದ್ಯಗಳ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿ; ಮೊದಲನೇ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಭಾರತಕ್ಕೆ ೪ ವಿಕೆಟ್‌ಗಳ ಜಯ

*****************

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ಇಂದು ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ. ಒಂದು ದಿನದ ಪ್ರವಾಸದ ಭಾಗವಾಗಿ ಅವರು, ರಾಣೆಬೆನ್ನೂರಿಗೆ ಭೇಟಿ ನೀಡಲಿದ್ದು, ಅಲ್ಲಿ ಅವರು, ಕರ್ನಾಟಕ ವೈಭವ ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

*****************

’ರಾಷ್ಟ್ರ ಮೊದಲು’ ಎಂಬುದು ಕೇಂದ್ರ ಸರ್ಕಾರದ ಅಭಿವೃದ್ಧಿ ಮಾದರಿಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ವಂದನಾ ನಿರ್ಣಯ ಸಂಬಂಧ ರಾಜ್ಯಸಭೆಯಲ್ಲಿ ನಿನ್ನೆ ನಡೆದ ಚರ್ಚೆಯಲ್ಲಿ ಉತ್ತರಿಸಿದ ಅವರು, ದೇಶದ ಅಭಿವೃದ್ಧಿ ಸಮಾಧಾನಪಡಿಸುವಿಕೆಯ ಮೇಲೆ ಅಲ್ಲ, ಬದಲಾಗಿ ತೃಪ್ತಿಯ ಮೇಲೆ ಕೇಂದ್ರೀಕೃತವಾಗಿದೆ. ಜನರು ಈ ಮಾದರಿಯನ್ನು ಪರೀಕ್ಷಿಸಿದ್ದಾರೆ, ಅರ್ಥಮಾಡಿಕೊಂಡಿದ್ದಾರೆ ಮತ್ತು ಬೆಂಬಲಿಸಿದ್ದಾರೆ. ಆದ್ದರಿಂದ ತಮ್ಮ ಸರ್ಕಾರಕ್ಕೆ ಮೂರನೇ ಬಾರಿಗೆ ಜನಾದೇಶ ನೀಡಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

'ಸಬ್ಕಾ ಸಾಥ್, ಸಬ್ಕಾ ವಿಕಾಸ್' ಮಾದರಿ ಅನುಸರಿಸುವ ತಮ್ಮ ಸರ್ಕಾರ ಕೌಶಲ್ಯ ಅಭಿವೃದ್ಧಿ, ಆರ್ಥಿಕ ಉನ್ನತಿ ಮತ್ತು ಕೈಗಾರಿಕೀಕರಣಕ್ಕೆ ಆದ್ಯತೆ ನೀಡಿದೆ ಎಂದು ಅವರು ಹೇಳಿದರು.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಕಾಂಗ್ರೆಸ್ ದ್ವೇಷಿಸುತ್ತಿದೆ. ಅವರ ಚುನಾವಣಾ ಸೋಲಿಗೆ ಕಾಂಗ್ರೆಸ್ ಕಾರಣವಾಗಿದೆ ಎಂದು ಆರೋಪಿಸಿದ ಅವರು, ಬಾಬಾ ಸಾಹೇಬ್ ಅವರನ್ನು ಭಾರತ ರತ್ನ ಪ್ರಶಸ್ತಿಗೆ ಅರ್ಹರೆಂದು ಕಾಂಗ್ರೆಸ್ ಎಂದಿಗೂ ಪರಿಗಣಿಸಿಲ್ಲ ಎಂದು ಪ್ರಧಾನಿ ದೂರಿದರು.

ಕೇಂದ್ರ ಸರ್ಕಾರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪರ ಕಾನೂನುಗಳನ್ನು ಬಲಪಡಿಸಿದೆ. ದಿವ್ಯಾಂಗರ ಕಲ್ಯಾಣಕ್ಕಾಗಿ ಶ್ರಮಿಸುತ್ತಿದೆ. ತೃತೀಯಲಿಂಗಿ ಸಮುದಾಯಕ್ಕೆ ಕಾನೂನು ಹಕ್ಕುಗಳನ್ನು ಖಚಿತಪಡಿಸಿದೆ. ಒಬಿಸಿ ಆಯೋಗಕ್ಕೆ ಸಾಂವಿಧಾನಿಕ ಸ್ಥಾನಮಾನ ನೀಡುವ ಮೂಲಕ ಇತರೆ ಹಿಂದುಳಿದ ಸಮುದಾಯಗಳ ದೀರ್ಘಕಾಲದಿಂದ ಬಾಕಿ ಉಳಿದಿದ್ದ ಬೇಡಿಕೆಯನ್ನು ತಮ್ಮ ಸರ್ಕಾರ ಈಡೇರಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

*****************

ಪ್ರಧಾನ ಮಂತ್ರಿ ಗತಿಶಕ್ತಿ ಯೋಜನೆಯಡಿ ದೇಶದಲ್ಲಿ ಎರಡು ಸಾವಿರದ ನಾಲ್ಕು ನೂರು ಕಿಲೋಮೀಟರ್‌ಗಳಿಗಿಂತ ಹೆಚ್ಚು ಉದ್ದದ ಎಂಟು ರಾಷ್ಟ್ರೀಯ ಅತಿವೇಗದ ಕಾರಿಡಾರ್‌ಗಳನ್ನು ಕಾರ್ಯಗತಗೊಳಿಸಲಾಗಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ಲೋಕಸಭೆಯಲ್ಲಿ ನಿನ್ನೆ ಲಿಖಿತ ಉತ್ತರದಲ್ಲಿ ಈ ಕುರಿತು ತಿಳಿಸಿದ ಸಚಿವರು, ದೇಶದಲ್ಲಿ ಯೋಜನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ರಾಜಸ್ಥಾನದಲ್ಲಿ ಅತಿ ಹೆಚ್ಚು ೮೮೭ ಕಿಲೋಮೀಟರ್ ಹೈ-ಸ್ಪೀಡ್ ಕಾರಿಡಾರ್‌ಗಳನ್ನು ಕಾರ್ಯಗತಗೊಳಿಸಲಾಗಿದೆ. ೫೮೩ ಕಿಲೋಮೀಟರ್‌ಗಳೊಂದಿಗೆ ಹರಿಯಾಣ ಎರಡನೇ ಸ್ಥಾನದಲ್ಲಿದೆ ಎಂದು ಅವರು ಹೇಳಿದರು.

*****************

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ದೇಶದಲ್ಲಿ ಜಾರಿಗೆ ತರಲಾದ ಮೂರು ಹೊಸ ಅಪರಾಧ ಕಾನೂನುಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಡಿಜಿಟಲ್ ಪ್ರದರ್ಶನವನ್ನು ಸ್ಥಾಪಿಸಲಾಗಿದೆ. ಕಳೆದ ವರ್ಷ ಜುಲೈ ೧ ರಂದು ದೇಶಾದ್ಯಂತ ಹೊಸ ಕಾನೂನುಗಳಾದ ಭಾರತೀಯ ನ್ಯಾಯ ಸಂಹಿತಾ, ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮ್ ಜಾರಿಗೆ ತರಲಾಗಿದ್ದು, ಭಾರತದ ನ್ಯಾಯ ವ್ಯವಸ್ಥೆಯಲ್ಲಿ ಐತಿಹಾಸಿಕ ಬದಲಾವಣೆಯನ್ನು ತರಲಾಗಿದೆ. ಸೈಬರ್ ಅಪರಾಧ ಮತ್ತು ಸಂಘಟಿತ ಅಪರಾಧದಂತಹ ಸಮಕಾಲೀನ ಸವಾಲುಗಳನ್ನು ಎದುರಿಸಲು ಮತ್ತು ಸಂತ್ರಸ್ತರಿಗೆ ನ್ಯಾಯವನ್ನು ಖಚಿತಪಡಿಸಿಕೊಳ್ಳಲು ಹೊಸ ಚೌಕಟ್ಟನ್ನು ಪರಿಚಯಿಸಲಾಗಿದೆ. ಹೊಸ ಕಾನೂನುಗಳು ಭಾರತೀಯ ದಂಡ ಸಂಹಿತೆ, ಅಪರಾಧ ಪ್ರಕ್ರಿಯಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಕಾಯ್ದೆಯನ್ನು ಬದಲಾಯಿಸಿವೆ.

ಮಹಾಕುಂಭ ಮೇಳದಲ್ಲಿ ಭಕ್ತರಿಗೆ ಅವರ ಕಾನೂನು ಹಕ್ಕುಗಳು ಮತ್ತು ನ್ಯಾಯಕ್ಕಾಗಿ ಡಿಜಿಟಲ್ ಸಾಧನಗಳ ಬಗ್ಗೆ ಶಿಕ್ಷಣ ನೀಡಲಾಗುತ್ತಿದೆ. ಕೇಂದ್ರ ಸರ್ಕಾರ ಮತ್ತು ಉತ್ತರ ಪ್ರದೇಶ ಸರ್ಕಾರ ಮೂರು ಹೊಸ ಕಾನೂನುಗಳ ಬಗ್ಗೆ ಜಾಗೃತಿ ಮೂಡಿಸಲು ವಿಭಿನ್ನ ಮಳಿಗೆಗಳನ್ನು ಸ್ಥಾಪಿಸಿದೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಉತ್ತರ ಪ್ರದೇಶ ಪೊಲೀಸ್ ಇಲಾಖೆಯ ಮುಖ್ಯ ನಿರ್ವಾಹಕ ಓಂ ಕುಮಾರ್ ಗುಪ್ತಾ, ಈ ಹೊಸ ಕಾನೂನುಗಳ ಬಗ್ಗೆ ಸಾರ್ವಜನಿಕರಿಗೆ ಸರಳ ಭಾಷೆಯಲ್ಲಿ ಮಾಹಿತಿಯನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು.

ಜನರಲ್ಲಿ ತಮ್ಮ ಹಕ್ಕುಗಳು ಮತ್ತು ಮೂರು ಹೊಸ ಕಾನೂನುಗಳ ಬಗ್ಗೆ ಬೀದಿ ನಾಟಕದ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಕಲಾವಿದ ಮುನ್ನಾ ಲಾಲ್ ಯಾದವ್ ಹೇಳಿದರು.

ಭಾರತದ ನ್ಯಾಯ ವ್ಯವಸ್ಥೆಯನ್ನು ಹೆಚ್ಚು ಪಾರದರ್ಶಕ, ಪರಿಣಾಮಕಾರಿ ಮತ್ತು ಆಧುನಿಕ ಸಮಾಜದ ಅಗತ್ಯಗಳಿಗೆ ಅನುಗುಣವಾಗಿ ಮಾಡಲು ಹೊಸ ಕಾನೂನುಗಳನ್ನು ವಿನ್ಯಾಸಗೊಳಿಸಲಾಗಿದೆ.

*****************

ತಮ್ಮ ಮೊದಲ ಹಣಕಾಸು ನೀತಿ ಸಮಿತಿ- ಎಂಪಿಸಿ ಸಭೆಯ ಅಧ್ಯಕ್ಷತೆ ವಹಿಸಿರುವ ನೂತನ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ, ಆರು ಸದಸ್ಯರ ಸಮಿತಿಯ ನಿರ್ಧಾರವನ್ನು ಇಂದು ಪ್ರಕಟಿಸಲಿದ್ದಾರೆ. ಕಳೆದ ವರ್ಷ ಡಿಸೆಂಬರ್‌ನಲ್ಲಿ ಅಧಿಕಾರ ವಹಿಸಿಕೊಂಡ ಮಲ್ಹೋತ್ರಾ ಅವರ ಮೊದಲ ನೀತಿ ಘೋಷಣೆ ಇದಾಗಿದೆ.

*****************

ಅಕ್ರಮ ವಲಸಿಗರ ಗಡೀಪಾರು ಪ್ರಕ್ರಿಯೆಯು ಅಂತರರಾಷ್ಟ್ರೀಯ ಸಂಬಂಧಗಳಲ್ಲಿ ಸಾಮಾನ್ಯವಾಗಿ ಅಂಗೀಕರಿಸಲ್ಪಟ್ಟ ತತ್ವವಾಗಿದೆ ಎಂದು ಕೇಂದ್ರ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.

ಅಮೆರಿಕದಿಂದ ಭಾರತೀಯ ಪ್ರಜೆಗಳ ಗಡೀಪಾರು ಕುರಿತು ರಾಜ್ಯಸಭೆಯಲ್ಲಿ ನಿನ್ನೆ ಹೇಳಿಕೆ ನೀಡಿದ ಅವರು, ಅಕ್ರಮ ವಲಸೆಯನ್ನು ತಡೆಗಟ್ಟುವುದು ರಾಷ್ಟ್ರಗಳ ಹಿತಾಸಕ್ತಿಯಾಗಿದೆ. ಬೇರೆ ದೇಶಗಳಲ್ಲಿ ಅಕ್ರಮವಾಗಿ ವಾಸಿಸುತ್ತಿರುವುದು ಕಂಡುಬಂದರೆ ಸಂಬಂಧ ಪಟ್ಟ ರಾಷ್ಟ್ರಗಳು ತಮ್ಮ ನಾಗರಿಕರನ್ನು ವಾಪಸ್ ಕರೆದುಕೊಂಡು ಹೋಗುವುದು ಕಡ್ಡಾಯವಾಗಿದೆ ಎಂದು ಅವರು ಹೇಳಿದರು.

ಗಡಿಪಾರು ಪ್ರಕ್ರಿಯೆಯು ಹೊಸದಲ್ಲ ಎಂದು ಹೇಳಿದ ಸಚಿವರು ಇತರ ದೇಶಗಳಿಂದ ಗಡಿಪಾರು ಮಾಡಲ್ಪಟ್ಟ ಭಾರತೀಯರ ಸಂಖ್ಯೆಯ ದತ್ತಾಂಶವನ್ನು ಅವರು ಸದನದೊಂದಿಗೆ ಹಂಚಿಕೊಂಡರು.

೨೦೦೯ ರಲ್ಲಿ ೭೩೪, ೨೦೨೪ ರಲ್ಲಿ ೧ ಸಾವಿರದ ೩೬೮ ಮತ್ತು ಈ ವರ್ಷ ೧೦೪ ಜನರನ್ನು ಭಾರತಕ್ಕೆ ಗಡೀಪಾರು ಮಾಡಲಾಗಿದೆ ಎಂದು ಜೈಶಂಕರ್ ಮಾಹಿತಿ ನೀಡಿದರು.

ಗಡಿಪಾರಾದವರಿಗೆ ಯಾವುದೇ ರೀತಿಯ ದೌರ್ಜನ್ಯವಾಗದಂತೆ ನೋಡಿಕೊಳ್ಳಲು ಭಾರತ ಸರ್ಕಾರ ಅಮೆರಿಕದ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ ಎಂದು ಅವರು ಹೇಳಿದರು.

ಧ್ವನಿ: ಎಸ್.ಜೈಶಂಕರ್

ವಿರೋಧ ಪಕ್ಷದ ಸದಸ್ಯರ ಕೆಲ ಆಕ್ಷೇಪ ಮತ್ತು ಗದ್ದಲದ ನಡುವೆಯೇ ವಿದೇಶಾಂಗ ಸಚಿವ ಡಾ. ಜೈಶಂಕರ್ ಲೋಕಸಭೆಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದರು.

*****************

ನವದೆಹಲಿಯಲ್ಲಿ ನಿನ್ನೆ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಗ್ರೀಸ್ ವಿದೇಶಾಂಗ ಸಚಿವ ಜಾರ್ಜ್ ಗೆರಪೆಟ್ರಿಟಿಸ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು.

ಈ ವೇಳೆ ಉಭಯ ನಾಯಕರು ಬಹು ಆಯಾಮದ ದ್ವಿಪಕ್ಷೀಯ ಸಂಬಂಧಗಳ ಕುರಿತು ವಿಚಾರ ವಿನಿಮಯ ಮಾಡಿಕೊಂಡರು.

ಸಭೆಯ ಸಂದರ್ಭದಲ್ಲಿ, ಭಾರತ-ಗ್ರೀಸ್ ಪಾಲುದಾರಿಕೆಯ ಮಹತ್ವವನ್ನು ಒತ್ತಿ ಹೇಳಿದ ಡಾ. ಜೈಶಂಕರ್, ಭಾರತ, ವ್ಯಾಪಾರ, ಹೂಡಿಕೆ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಸಹಕಾರ ಬಯಸುತ್ತದೆ ಎಂದು ಹೇಳಿದರು.

ಗ್ರೀಸ್ ಮತ್ತು ಭಾರತದ ನಡುವಿನ ದ್ವಿಪಕ್ಷೀಯ ಸಂಬಂಧಗಳು ಕಳೆದ ಎರಡು ವರ್ಷಗಳಲ್ಲಿ ಹೊಸ ಎತ್ತರಕ್ಕೆ ಏರಿವೆ ಎಂದು ಗ್ರೀಸ್‌ನ ವಿದೇಶಾಂಗ ಸಚಿವ ಜಾರ್ಜ್ ಗೆರಪೆಟ್ರಿಟಿಸ್ ಹೇಳಿದರು. ಪ್ರವಾಸೋದ್ಯಮ, ಸಂಸ್ಕೃತಿ ಮತ್ತು ವ್ಯಾಪಾರ ಸೇರಿದಂತೆ ಎಲ್ಲಾ ವಲಯಗಳಲ್ಲಿ ಗ್ರೀಸ್ ತನ್ನ ದ್ವಿಪಕ್ಷೀಯ ಸಂಬಂಧಗಳನ್ನು ಉನ್ನತೀಕರಿಸಲು ಬಯಸುತ್ತದೆ ಎಂದರು.

*****************

ಕೃಷಿ ವ್ಯಾಪಾರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಇ-ನಾಮ್ ವೇದಿಕೆಯನ್ನು ವಿಸ್ತರಿಸಲಾಗಿದ್ದು, ೧೦ ಹೊಸ ಸರಕುಗಳು ಮತ್ತು ಅವುಗಳ ವ್ಯಾಪಾರದ ಮಾನದಂಡಗಳನ್ನು ಸೇರಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ಈ ಕುರಿತು ಹೇಳಿಕೆ ಬಿಡುಗಡೆಗೊಳಿಸಿದ್ದು, ಸರಕುಗಳಲ್ಲಿ ಒಣಗಿದ ತುಳಸಿ ಎಲೆಗಳು, ಕಡಲೆಹಿಟ್ಟು, ಡ್ರ್ಯಾಗನ್ ಫ್ರೂಟ್ ಮತ್ತು ಗೋಧಿ ಹಿಟ್ಟು ಸೇರಿವೆ. ಈ ಉಪಕ್ರಮ ಕೃಷಿ ಸರಕುಗಳ ವ್ಯಾಪ್ತಿಯನ್ನು ಹೆಚ್ಚಿಸುವ ಮತ್ತು ರೈತರು ಮತ್ತು ವ್ಯಾಪಾರಿಗಳಿಗೆ ಡಿಜಿಟಲ್ ವ್ಯಾಪಾರ ವೇದಿಕೆಯಿಂದ ಲಾಭ ಪಡೆಯಲು ಹೆಚ್ಚಿನ ಅವಕಾಶಗಳನ್ನು ನೀಡುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದೆ.

ಈ ಹೆಚ್ಚುವರಿ ವ್ಯಾಪಾರದ ಮಾನದಂಡಗಳ ಸೇರ್ಪಡೆ ಕೃಷಿ ವಲಯವನ್ನು ಆಧುನೀಕರಿಸಲು ಸರ್ಕಾರದ ನಿರಂತರ ಪ್ರಯತ್ನಗಳೊಂದಿಗೆ ಹೊಂದಿಕೆಯಾಗುತ್ತದೆ, ಹೆಚ್ಚಿನ ಒಳಗೊಳ್ಳುವಿಕೆ, ದಕ್ಷತೆ ಮತ್ತು ಮಾರುಕಟ್ಟೆಯ ಪಾರದರ್ಶಕತೆಯನ್ನು ಖಚಿತಪಡಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ. ಈ ಸೇರ್ಪಡೆಯೊಂದಿಗೆ, ಇ-ನಾಮ್ ವೇದಿಕೆಯಲ್ಲಿನ ಸರಕುಗಳ ಸಂಖ್ಯೆ ೨೩೧ ತಲುಪಿದೆ.

*****************

ಭಾರತ ಮತ್ತು ಸ್ಪೇನ್‌ನ ರಕ್ಷಣಾ ಸಚಿವಾಲಯಗಳ ನಡುವಿನ ೫ನೇ ಜಂಟಿ ಕಾರ್ಯಕಾರಿ ಗುಂಪು ಸಭೆ ನವದೆಹಲಿಯಲ್ಲಿ ನಿನ್ನೆ ನಡೆಯಿತು. ಸಭೆಯಲ್ಲಿ, ಉಭಯ ರಾಷ್ಟ್ರಗಳ ಅಧಿಕಾರಿಗಳು ಪ್ರಸ್ತುತ ನಡೆಯುತ್ತಿರುವ ದ್ವಿಪಕ್ಷೀಯ ರಕ್ಷಣಾ ಸಹಕಾರದ ಚಟುವಟಿಕೆಗಳನ್ನು ಪರಿಶೀಲಿಸಿದರು.

*****************

ಮಹಾರಾಷ್ಟ್ರದ ವಿದರ್ಭ ಕ್ರಿಕೆಟ್ ಸಂಸ್ಥೆಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಮೂರು ಪಂದ್ಯಗಳ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿಯ ಮೊದಲನೇ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಭಾರತ ೪ ವಿಕೆಟ್‌ಗಳ ಜಯ ಸಾಧಿಸಿದೆ.

ಟಾಸ್ ಗೆದ್ದು, ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಇಂಗ್ಲೆಂಡ್ ೪೭.೪ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೨೪೮ ರನ್ ಗಳಿಸಿತು. ಭಾರತದ ಪರ ಹರ್ಷಿತ್ ರಾಣಾ ಮತ್ತು ರವೀಂದ್ರ ಜಡೇಜಾ ತಲಾ ೩ ವಿಕೆಟ್ ಪಡೆದರು.

೨೪೯ ರನ್‌ಗಳ ಗುರಿ ಬೆನ್ನತ್ತಿದ ಭಾರತ ೩೮.೪ ಓವರ್‌ಗಳಲಿ ೬ ವಿಕೆಟ್ ನಷ್ಟಕ್ಕೆ ೨೫೧ ರನ್ ಗಳಿಸಿ ಗೆಲುವಿನ ನಗೆ ಬೀರಿತು.

ಭಾರತದ ಪರ ಶುಭ್‌ಮನ್ ಗಿಲ್ ೮೭, ಶ್ರೇಯಸ್ ಅಯ್ಯರ್ ೫೯ ಹಾಗೂ ಅಕ್ಸರ್ ಪಟೇಲ್ ೫೨ ರನ್ ಗಳಿಸುವ ಮೂಲಕ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು.

ಸರಣಿಯ ಎರಡನೇ ಪಂದ್ಯ ಇದೇ ೯ ರಂದು ಒಡಿಶಾದ ಕಟಕ್‌ನಲ್ಲಿ ನಡೆಯಲಿದೆ.

*********ಮುಕ್ತಾಯ*********